ಇ) ವಿಶ್ವ ಬ್ಯಾಂಕ್ ನೆರವಿನ ಕರ್ನಾಟಕ ಆರೋಗ್ಯ ವ್ಯವಸ್ಥೆಗಳ ಅಭಿವೃದ್ಧಿ ಯೋಜನೆಯಡಿ ಕೈಗೊಂಡಿದ್ದ ಮಂಡ್ಯ ಜಿಲ್ಲಾ ಆಸ್ಪತ್ರೆಯ ನವೀಕರಣ ಮತ್ತು ಅಭಿವೃದ್ಧಿ ಕಾಮಗಾರಿಯು ಪೂರ್ಣಗೊಂಡಿವೆ. ಹಾಗೂ ಈ ಆಸ್ಪತ್ರೆ ಕಟ್ಟಡವನ್ನು 2000ದ ಜೂನ್ ತಿಂಗಳಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕರಿಗೆ ಹಸ್ತಾಂತರಿಸಲಾಗಿದೆ.

ಇದೇ ಆಸ್ಪತ್ರೆಯಲ್ಲಿ ಈ ಹಿಂದೆ ಲೋಕೋಪಯೋಗಿ ಇಲಾಖೆಯಿಂದ ಪ್ರಾರಂಭಿಸಿ ಅಪೂರ್ಣಗೊಂಡಿರುವ ಕಾಮಗಾರಿಗಳನ್ನು ಪೂರ್ಣಗೊಳಿಸಲು ಹಾಗೂ ಅಗತ್ಯವಿರುವ ಇತರೆ ಹೆಚ್ಚುವರಿ ಕಾಮಗಾರಿಗಳನ್ನು ಕೈಗೊಳ್ಳಲು ಸರ್ಕಾರದ ಆದೇಶ ಸಂಖ್ಯೆ ಆಕುಕ 335 ಆಯೋಸಂ 2001, ದಿನಾಂಕ 11.1.2002ರಲ್ಲಿ ಒಟ್ಟು ರೂ. 200.00 ಲಕ್ಷಗಳಿಗೆ ಮಂಜೂರಾತಿ ನೀಡಲಾಗಿದೆ. ಈ ಆದೇಶದನ್ವಯ ಕಾಮಗಾರಿ ಕೈಗೊಳ್ಳಲು ಟೆಂಡರ್ ಪ್ರಕ್ರಿಯೆ ಪ್ರಾರಂಭಿಸಲಾಗಿದೆ.

ಈ) ಸರ್ಕಾರದ ದಿನಾಂಕ 11.1.2002 ಆದೇಶದಂತೆ ಉಳಿದ ಕಾಮಗಾರಿಗಳನ್ನು ಪೂರ್ಣಗೊಳಿಸಲು ಕ್ರಮ ತೆಗೆದುಕೊಳ್ಳಲಾಗುವುದು.

ಮಂಡ್ಯ ಜಿಲ್ಲಾ ಆಸ್ಪತ್ರೆಯಲ್ಲಿ ಟ್ರಾಮಾ ಸೆಂಟರ್ ಪ್ರಾರಂಭಿಸುವುದು

1168 (1604) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ನಗರವು ಬೆಂಗಳೂರು-ಮೈಸೂರು ನಡುವಿನ ರಾಜ್ಯ ಹೆದ್ದಾರಿಯಲ್ಲಿದ್ದು, ಈ ರಸ್ತೆಯಲ್ಲಿನ ಅಪಘಾತದ ಗಾಯಾಳುಗಳಿಗೆ ತುರ್ತು ಚಿಕಿತ್ಸೆ ನೀಡಲು ಮಂಡ್ಯ ಜಿಲ್ಲಾ ಆಸ್ಪತ್ರೆಯಲ್ಲಿ ಒಂದು 'ಟ್ರಾಮಾ ಸೆಂಟರ್' ಪ್ರಾರಂಭಿಸುವ ಅವಶ್ಯಕತೆಯನ್ನು ಸರ್ಕಾರವು ಮನಗೊಂಡಿದೆಯೇ?

ಆ) ಹಾಗಿದ್ದಲ್ಲಿ ಟ್ರಾಮಾ ಸೆಂಟರ್ (Trauma Centre) ಪ್ರಾರಂಭಿಸುವ ಬಗೆಗೆ ಇಲಾಖೆ ಸಿದ್ಧತೆಯನ್ನು ಮಾಡಿಕೊಂಡಿದೆಯೇ?

ಇ) ಈ ಟ್ರಾಮಾ ಸೆಂಟರ್ (Trauma Centre) ಅನ್ನು ಎಂದಿನಿಂದ ಪ್ರಾರಂಭಿಸಲಾಗುವುದು?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹೌದು

ಆ) ಮಂಡ್ಯ ಜಿಲ್ಲಾ ಆಸ್ಪತ್ರೆಯಲ್ಲಿ ಟ್ರಾಮಾ ಕೇಂದ್ರವು ಕಾರ್ಯಾಚರಣೆಯಲ್ಲಿದೆ.

ಇ) ಉದ್ಭವಿಸುವುದಿಲ್ಲ.

ಭಾರತೀಯ ವೈದ್ಯಪದ್ಧತಿ ಮತ್ತು ಹೋಮಿಯೋಪತಿ ಆಸ್ಪತ್ರೆಗಳಲ್ಲಿ ಸಿಬ್ಬಂದಿ ಕೊರತೆ

1169 (1606) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) : ಮಾನ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ಜಿಲ್ಲೆಯಲ್ಲಿ ಪ್ರಸ್ತುತ ಭಾರತೀಯ ವೈದ್ಯ ಪದ್ಧತಿ ಹಾಗೂ ಹೋಮಿಯೋಪತಿ ಪದ್ಧತಿಯ ಆಸ್ಪತ್ರೆಗಳೆಷ್ಟು;

ಆ) ಈ ಆಸ್ಪತ್ರೆಗಳಿಗೆ ಮಂಜೂರಾಗಿರುವ ಸಿಬ್ಬಂದಿಯ ವಿವರಗಳೇನು;

ಇ) ಖಾಲಿ ಇರುವ ಹುದ್ದೆಗಳ ಸಂಖ್ಯೆಯೆಷ್ಟು;

ಈ) ಈ ಹುದ್ದೆಗಳನ್ನು ತುಂಬಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು?

ಶ್ರೀಮತಿ ನಫೀಜ ಫಜಲ್ (ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ರಾಜ್ಯ ಸಚಿವರು) :

ಅ) ಒಟ್ಟು ಆಸ್ಪತ್ರೆಗಳು : 04

ಆ) ಮಂಜೂರಾದ ಸಿಬ್ಬಂದಿ ವಿವರ ಕೆಳಕಂಡಂತಿದೆ :

1)	ವೈದ್ಯರು	: 06
2)	ಶುಶ್ರೂಷಕಿಯರು	: 06
3)	ಔಷಧಿ ವಿತರಕರು	: 05
4)	ದ್ವಿತೀಯ ದರ್ಜೆ ಸಹಾಯಕರು	: 02
5)	ಬೆರಳಚ್ಚುಗಾರರು	: 01
6)	ಗ್ರೂಪ್-ಡಿ-ನೌಕರರು	: 09
7)	ಕುಕ್ (ಅಡಿಗೆಯವರು)	: 01
ಒಟ್ಟು ಮಂಜೂರಾದ ಹುದ್ದೆಗಳು		: 30

ಇ) ಖಾಲಿ ಇರುವ ಹುದ್ದೆಗಳ ವಿವರ ಕೆಳಕಂಡಂತಿದೆ :

1)	ವೈದ್ಯರು	: 01
2)	ಶುಶ್ರೂಷಕಿಯರು	: 04
3)	ಔಷಧಿ ವಿತರಕರು	: 01
4)	ಬೆರಳಚ್ಚುಗಾರರು	: 01
5)	ಗ್ರೂಪ್-ಡಿ-ನೌಕರರು	: 04
ಒಟ್ಟು ಮಂಜೂರಾದ ಹುದ್ದೆಗಳು		: 11

ಈ) ಇಲಾಖೆಯಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳನ್ನು ವಿಶೇಷ ನೇಮಕಾತಿ ಅಧಿಸೂಚನೆಯ ಸಂಖ್ಯೆ : ಡಿಪಿಎಆರ್ : 89 : ಎಸ್ಆರ್‌ಡಿ : 2001, ದಿನಾಂಕ : 29-5-2002 ರೀತ್ಯ ಭರ್ತಿ ಮಾಡಿಕೊಳ್ಳಲು ಸರ್ಕಾರವು ಕ್ರಮ ಕೈಗೊಳ್ಳುತ್ತಿದೆ. ಉಳಿದ ಕೊರತೆಯಿರುವ ವೈದ್ಯಕೀಯ ಸಿಬ್ಬಂದಿ ಹುದ್ದೆಗಳಾದ ಶುಶ್ರೂಷಕಿಯರು ಹಾಗೂ ಔಷಧಿ ವಿತರಕರು ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳನ್ನು ತರಬೇತಿಗೆ ಆಯ್ಕೆ ಮಾಡಿ ತರಬೇತಿ ಗೊಳಿಸಲು ತರಬೇತಿ ನಿಯಮ ಮತ್ತು ಪಠ್ಯ ಕ್ರಮಗಳನ್ನು ಪರಿಷ್ಕರಣೆ ಮಾಡಲಾಗುತ್ತಿದೆ. ಗ್ರೂಪ್-ಡಿ- ಹುದ್ದೆಗಳನ್ನು ಸಕ್ರಮಗೊಳಿಸಲಾಗಿರುವ ದಿನಗೂಲಿ ನೌಕರರಿಂದ ಭರ್ತಿ ಮಾಡಲು ಸರ್ಕಾರದ ಆದೇಶ ದಿನಾಂಕ:23-11-95 ರ ಪ್ರಕಾರ ಆಯಾ ಜಿಲ್ಲಾಧಿಕಾರಿಗಳನ್ನು ಕೋರಲಾಗಿದೆ. ಈಗಾಗಲೇ ಈ ಹಿಂದೆ ಹಲವು ಹುದ್ದೆಗಳನ್ನು ಈ ಮೂಲಕ ಭರ್ತಿ ಮಾಡಲಾಗಿದೆ.

ಸೇಡಂ ತಾಲ್ಲೂಕಿನ ತೆಲಂಗಾಣ ಗಡಿಯಾಚಿನಲ್ಲಿರುವ ನಾಡೇಪಲ್ಲಿ ಗ್ರಾಮದ ಉಸ್ಕುಬಾವಿ ಹೊಳೆತ್ತುವುದು.

1170 (998) ಶ್ರೀ ಬಸವಂತರೆಡ್ಡಿ ಮೊತಕಪಲ್ಲಿ (ಸೇಡಂ) : ಮಾನ್ಯ ಗ್ರಾಮೀಣಾಭಿವೃದ್ಧಿ ಮಂತ್ರಿ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?